ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ
18ನೇ ಕ್ರಾಸ್, ಐಡಿಯಲ್ ಹೋಮ್ಸ್, ರಾಜರಾಜೇಶ್ವರಿನಗರ, ಬೆಂಗಳೂರು- 98

ಸಂಖ್ಯೆ.ಮು.ಅ/ರಾ.ರಾ.ನ.ವ/ಪಿಆರ್/ 81 /2022-23 ದಿನಾಂಕ:26.08.2022

ಪರಿವೀಕ್ಷಣಾ ವರದಿ

ವಿಷಯ:- **Construction of Gallery in J.P Park ward no.17** ಕಾಮಗಾರಿಯ ಪರಿವೀಕ್ಷಣಾ ವರದಿ ನೀಡುವ ಬಗ್ಗೆ.

* * * * *

ಹಾಜರಿದ್ದ ಅಧಿಕಾರಿಗಳು:

1. ಕಾರ್ಯಪಾಲಕ ಅಭಿಯಂತರರು ರಾ.ರಾ ನಗರ ವಿಭಾಗ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಶವಂತಪುರ ಉಪವಿಭಾಗ
3. ಸಹಾಯಕ ಅಭಿಯಂತರರು, ವಾರ್ಡ್ ನಂ.17

ರಾಜರಾಜೇಶ್ವರಿ ನಗರ ವಲಯ ವ್ಯಾಪ್ತಿಯ ವಾರ್ಡ್ ನಂ.17, ಜೆ.ಪಿ ಪಾರ್ಕ್ ವಾರ್ಡ್ ವ್ಯಾಪ್ತಿಯಲ್ಲಿ 2020-21ನೇ ಸಾಲಿನ ಲೆಕ್ಕಶೀರ್ಷಿಕೆ ಪಿ-3853 ಅನುದಾನದಡಿಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಯಾದ **"Construction of Gallery in J.P Park ward no.17" (017-21-000017)** ರಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ರೂ.200.00 ಲಕ್ಷಗಳಿಗೆ 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆಯ ದರಪಟ್ಟಿಯ ದರದಂತೆ ಅಂದಾಜು ಪಟ್ಟಿ ಮಂಜೂರಾಗಿದ್ದು, ಅದರಂತೆ ಟೆಂಡರ್ ಕರೆದು ಸದರಿ ಕಾಮಗಾರಿಯ ಕಾರ್ಯಾದೇಶ ಸಂಖ್ಯೆ: EE/RRND/W.O.No./000171/2020-21, Dt.11.03.2022 ರಂದು ಗುತ್ತಿಗೆದಾರರಾದ ಶ್ರೀ.ನಂಜುಂಡೇಶ್ವರ ಕನ್ಸ್ಟ್ರಕ್ಷನ್ಸ್ (ಶ್ರೀ.ಎಂ.ರಾಜೇಶ್) ರವರಿಗೆ ಕಾರ್ಯಾದೇಶವನ್ನು ನೀಡಲಾಗಿರುತ್ತದೆ.

ಮುಂದುವರೆದು, ಸದರಿ ಕಾಮಗಾರಿಯ ಮೂಲ ಅಂದಾಜು ಪಟ್ಟಿಯಲ್ಲಿ ಜೆ.ಪಿ ಉದ್ಯಾನವನದಲ್ಲಿನ ಮ್ಯೂಸಿಕಲ್ ಫೌಂಟೈನ್‌ನ ವೀಕ್ಷಣೆಗೆ ಅನುವಾಗುವಂತೆ ಪ್ರೇಕ್ಷಕರ ಗ್ಯಾಲರಿ ನಿರ್ಮಾಣಕ್ಕೆ ಅವಶ್ಯವಿದ್ದ ಅಂಶಗಳನ್ನು ಅಳವಡಿಸಿಕೊಂಡು ಅಂದಾಜುಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಅದರಂತೆ ಕಾಮಗಾರಿಯು ಪ್ರಗತಿಯಲ್ಲಿದ್ದಾಗ ಮಾನ್ಯ ತೋಟಗಾರಿಕೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಶಾಸಕರು, ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ರವರು ಪ್ರಗತಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಸದರಿ ಕಾಮಗಾರಿಯು ಅಂದಾಜುಪಟ್ಟಿಯಲ್ಲಿ ಮತ್ತು ವಿನ್ಯಾಸದಲ್ಲಿ 2 ಅಡಿ ಅಗಲದ ಮೆಟ್ಟಿಲುಗಳನ್ನು (Seating Steps) ನಿರ್ಮಿಸಲು ಅವಕಾಶ ಕಲ್ಪಿಸಿಕೊಂಡಿರುವುದನ್ನು ಗಮನಿಸಿ ಕೇವಲ 2 ಅಡಿ ಅಗಲದ ಮೆಟ್ಟಿಲಿನಲ್ಲಿ ಒಬ್ಬ ವ್ಯಕ್ತಿ ಕುಳಿತಿದ್ದರೂ ಮತ್ತೋಬ್ಬರು ಆರಾಮದಾಯಕವಾಗಿ ಮುಂದೆ ಹೋಗಲು ಮೆಟ್ಟಿಲುಗಳ ಅಗಲವನ್ನು ಹೆಚ್ಚಿಸಲು ಅಗತ್ಯ ಕ್ರಮ ವಹಿಸಲು ಮಾನ್ಯ ಸಚಿವರು ಸೂಚಿಸಿರುತ್ತಾರೆ.

ಮಾನ್ಯ ತೋಟಗಾರಿಕೆ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಶಾಸಕರು, ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ ರವರ ನಿರ್ದೇಶನದಂತೆ ವಾರ್ಡ್‌ನ ಸಹಾಯಕ ಅಭಿಯಂತರರೊಡನೆ ಮು.ಅ(ರಾ.ರಾ.ನಗರ) ಮತ್ತು ಕಾ.ಪಾ.ಅ(ರಾ.ರಾ.ನಗರ)/ಸ.ಕಾ.ಅ(ಯಶವಂತಪುರ) ರವರು ಕಾಮಗಾರಿ ಸ್ಥಳವನ್ನು ಪರಿಶೀಲಿಸಿ, ಸದರಿ ಕಾಮಗಾರಿಯ ಮೂಲ ಅಂದಾಜುಪಟ್ಟಿಯಲ್ಲಿ ಅನುವು ಮಾಡಿಕೊಂಡಿದ್ದ 0.60 ಮೀ.ಅಗಲದ ಮೆಟ್ಟಿಲುಗಳ ಬದಲಿಗೆ 1.20 ಮೀ ಅಗಲದ ಮೆಟ್ಟಿಲುಗಳನ್ನು ನಿರ್ಮಿಸುವುದು ಸಮಂಜಸವಾಗಿರುವುದರಿಂದ ಸದರಿ ಕಾಮಗಾರಿಯ ಮೂಲ ಅಂದಾಜುಪಟ್ಟಿಯಲ್ಲಿ

ಪು.ತಿ.ನೋ...

Scanned with CamScanner

ವಿಷಯ

ಅಳವಡಿಸಿಕೊಳ್ಳಲಾಗಿರುವ ಅಂಶಗಳನ್ನು ಸ್ಥಳದಲ್ಲಿನ ಅವಶ್ಯಕತೆ ಹಾಗೂ ಸಾರ್ವಜನಿಕರ ಉಪಯೋಗಕ್ಕಾಗಿ ಅನುಕೂಲವಾಗುವಂತೆ ಅವಶ್ಯವಿರುವ ಅಂಶಗಳನ್ನು ಅಳವಡಿಸಿಕೊಂಡು ಕೆಲವು ಮಾರ್ಪಾಡುಗಳೊಂದಿಗೆ ಮಾರ್ಪಾಡು ಅಂದಾಜು ಪಟ್ಟಿಯನ್ನು ಅನುಮೋದಿತ ಟೆಂಡರ್ ಮೊತ್ತದೊಳಗೆ ತಯಾರಿಸಿ ಅನುಮೋದನೆ ಪಡೆದುಕೊಳ್ಳಲು ಕಾರ್ಯಪಾಲಕ ಅಭಿಯಂತರರು (ರಾ.ರಾ.ನಗರ) ರವರಿಗೆ ಪರಿವೀಕ್ಷಣೆ ಸಮಯದಲ್ಲಿ ಸೂಚಿಸಲಾಯಿತು.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿನಗರ ವಲಯ

ರವರಿಗೆ.
ಕಾರ್ಯಪಾಲಕ ಅಭಿಯಂತರರು
ರಾ.ರಾ.ನಗರ ವಿಭಾಗ

Scanned with CamScanner